50 GOLDEN JUBILEE JSS COLLEGE OF ARTS, COMMERCE & SCIENCE OOTY ROAD, MYSORE

# ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು

(ಮೈಸೂರು ವಿಶ್ವವಿದ್ಯಾನಿಲಯದಿಂದ ಸ್ವಾಯತ್ತತೆ ಪಡೆದಿದೆ * ನ್ಯಾಕ್‌ನಿಂದ 'ಎ' ದರ್ಜೆ ಮಾನ್ಯತೆ ಪಡೆದಿದೆ)
'ಉತ್ಕೃಷ್ಟತಾ ಅಂತಃಸಾಮರ್ಥ್ಯ ಉಳ್ಳ' ಕಾಲೇಜು ಎಂದು ಯುಜಿಸಿಯಿಂದ ಗುರುತಿಸಲ್ಪಟ್ಟಿದೆ
ಊಟಿರಸ್ತೆ, ಮೈಸೂರು-570 025, ಕರ್ನಾಟಕ

1916 H.H. Jagadguru Dr. Sri Shivarathri Rajendra Mahaswamiji 2015 Centenary Celebrations

☎ 0821-2548236 & 2548380 Fax: 0821-2548238 E-mail: jssautonomous@gmail.com

ದಿನಾಂಕ 18-01-2016

## ರಾಷ್ಟ್ರೀಯ ಯುವ ದಿನಾಚರಣೆ ಸಪ್ತಾಹ ಹಾಗೂ ಸ್ವಚ್ಛತಾ ಕಾರ್ಯಕ್ರಮದ ವರದಿ

ದಿನಾಂಕ 15-01-2016 ರ ಶನಿವಾರದಂದು ಜಿಲ್ಲಾಡಳಿತ, ಮೈಸೂರು ಜಿಲ್ಲೆ, ಕಾಲೇಜು ಶಿಕ್ಷಣ ಇಲಾಖೆ ಮತ್ತು ಪದವಿಪೂರ್ವ ಶಿಕ್ಷಣ ಇಲಾಖೆ, ಮೈಸೂರು, ರಾಷ್ಟ್ರೀಯ ಸೇವಾ ಯೋಜನೆ ಮತ್ತು ವಿದ್ಯಾರ್ಥಿ ಕ್ಷೇಮಪಾಲನಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ನೆಹರು ಯುವ ಕೇಂದ್ರ, ಮೈಸೂರು, ಜಿಲ್ಲಾ ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ, ಮೈಸೂರು ಮತ್ತು ಜೆಎಸ್ ಎಸ್ ಕಾಲೇಜು, ಊಟಿ ರಸ್ತೆ, ಮೈಸೂರು- ಇವರುಗಳ ಸಹಯೋಗದಲ್ಲಿ ಸ್ವಾಮಿ ವಿವೇಕಾನಂದರ ಜನ್ಮ ದಿನಾಚರಣೆ ಪ್ರಯುಕ್ತ 'ರಾಷ್ಟ್ರೀಯ ಯುವ ದಿನಾಚರಣೆ ಸಪ್ತಾಹ ಹಾಗೂ ಸ್ವಚ್ಛತಾ ಕಾರ್ಯಕ್ರಮ'ವು ಜರುಗಿತು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಮೈಸೂರು ವಿಶ್ವವಿದ್ಯಾನಿಲಯದ ಕಾರ್ಯಕ್ರಮ ಸಂಯೋಜನಾಧಿಕಾರಿಗಳಾದ ಡಾ. ಕೆ ಕಾಳಚನ್ನೇಗೌಡರು 'ರಾಷ್ಟ್ರೀಯ ಸೇವಾ ಯೋಜನೆಯು ಗಾಂಧೀಜಿ ಮತ್ತು ಸ್ವಾಮಿ ವಿವೇಕಾನಂದರ ಆಶಯಗಳಿಂದ ಕೂಡಿದ್ದು ಸ್ವಚ್ಛತೆಗೂ ಆದ್ಯತೆ ನೀಡುತ್ತಿದೆ. ಜೆ ಎಸ್ ಎಸ್ ವಿದ್ಯಾಸಂಸ್ಥೆ ಜಾತ್ಯಾತೀತವಾಗಿ ದಾಸೋಹ ಮತ್ತು ವಿದ್ಯೆಯನ್ನು ಗ್ರಾಮಗಳಿಗೂ ವಿಸ್ತರಿಸುತ್ತಿರುವುದು ಶ್ಲಾಘನೀಯ ಕಾರ್ಯವಾಗಿದೆ. ಯುವ ಜನತೆಯು ನಮ್ಮ ದೇಶದಲ್ಲಿ ಹೆಚ್ಚಾಗಿದ್ದು ಸೂಕ್ತ ಮಾರ್ಗದರ್ಶನ ಹಾಗೂ ಗುರಿಯ ಅವಶ್ಯಕತೆಯಿದೆ. ಯುವ ಶಕ್ತಿ ಜೀವನ ಚರಿತ್ರೆಗಳನ್ನು ಓದುವುದರ ಮೂಲಕ ಸಮಾಜಮುಖಿಯಾಗಿ ಉತ್ತಮವಾದ ದೇಶವನ್ನು ಕಟ್ಟಬೇಕಾಗಿದೆ' ಎಂದು ಹೇಳಿದರು.

ಮತ್ತೋರ್ವ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಮೈಸೂರು ಮಹಾನಗರ ಪಾಲಿಕೆಯ ಆರೋಗ್ಯಾಧಿಕಾರಿಗಳಾದ ಡಾ. ಡಿ.ಕೆ. ನಾಗರಾಜುರವರು 'ಪ್ರತಿಯೊಬ್ಬರಿಗೂ ದೇಶಕ್ಕೆ ಏನಾದರೂ ಕೊಡುಗೆ ಕೊಡಬೇಕೆಂಬ ಧ್ಯೇಯವಿರಬೇಕು. ಯುವ ಜನತೆ ಸ್ವಚ್ಛತೆಗೆ ಆದ್ಯತೆ ನೀಡಿ ತಮ್ಮ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು. ಭಾರತದ ಪ್ರಥಮ ಸ್ವಚ್ಛ ನಗರವೆಂದು ಹೆಸರು ಪಡೆದಿರುವ ಮೈಸೂರಿನ ಹೆಸರನ್ನು ಚಿರಸ್ಥಾಯಿಯಾಗಿ ಉಳಿಸಬೇಕೆಂದು' ತಮ್ಮ ಭಾಷಣದಲ್ಲಿ ತಿಳಿಸಿ, 'ಸ್ವಚ್ಛತಾ ಪ್ರತಿಜ್ಞಾ ವಿಧಿ'ಯನ್ನು ಬೋಧಿಸಿದರು.

ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಕಾಲೇಜಿನ ಮುಖ್ಯ ಕಾರ್ಯನಿರ್ವಾಹಕರಾದ ಪ್ರೊ. ಬಿ.ವಿ. ಸಾಂಬಶಿವಯ್ಯನವರು ಮಾತನಾಡಿ 'ಸ್ವಾಮಿ ವಿವೇಕಾನಂದರು ಭಾರತದ ಸಾಮಾಜಿಕ ಮತ್ತು ಆಧ್ಯಾತ್ಮಿಕ ಶಕ್ತಿಯನ್ನು ಜಗತ್ತಿಗೆ ಸಾರಿದರು. ಯುವ ಜನಾಂಗ ದೇಶದ ಐಕ್ಯತೆ, ಸಮಗ್ರತೆ ಮತ್ತು ಅಭಿವೃದ್ಧಿಗಾಗಿ ಕಂಕಣಬದ್ಧರಾಗಿರುವಂತೆ ಎಚ್ಚರಿಸಿದರು. ಈ ಹಿನ್ನಲೆಯಲ್ಲಿ ಅವರ ಜನ್ಮದಿನವನ್ನು 1984 ರಿಂದ "ರಾಷ್ಟ್ರೀಯ ಯುವ ದಿನಾಚರಣೆ"ಯನ್ನಾಗಿ ಆಚರಿಸಲಾಗುತ್ತಿದ್ದು, ಅದರಂತೆ ನಮ್ಮ ಕಾಲೇಜಿನಲ್ಲೂ ಈ ದಿನಾಚರಣೆಯ ಆಚರಣೆಯ ಅಡಿಯಲ್ಲಿ ನಮ್ಮ ದೇಶದ ಮಹತ್ವಾಕಾಂಕ್ಷಿ ಆಂದೋಲನವಾಗಿರುವ 'ಸ್ವಚ್ಛ ಭಾರತ ಅಭಿಯಾನ ಕಾರ್ಯಕ್ರಮ'ವನ್ನು ಹಮ್ಮಿಕೊಳ್ಳಲಾಗಿದೆ. ಇದು ಆರೋಗ್ಯವಂತ ಭಾರತವನ್ನು ನಿರ್ಮಿಸಲು, ನಮ್ಮ ಸುತ್ತ ಮುತ್ತಲ ಪರಿಸರದ ಜೊತೆಗೆ ಸಮಾಜವನ್ನು ಸ್ವಚ್ಛವಾಗಿಟ್ಟುಕೊಳ್ಳಲು ಸಹಾಯಕವಾಗುತ್ತದೆ. ಭಾರತದಲ್ಲಿಯೇ ನಮ್ಮ ಮೈಸೂರು ಅತೀ ಸ್ವಚ್ಛ ನಗರವೆಂಬ ಕೀರ್ತಿಗೆ ಪಾತ್ರರಾಗಿರುವುದು ಸಂತೋಷದ ಸಂಗತಿಯಾಗಿದೆ. ನಾವು ಇಷ್ಟಕ್ಕೆ ತೃಪ್ತಿಪಟ್ಟುಕೊಳ್ಳದೆ ಪ್ರತಿಯೊಂದು ಹಳ್ಳಿಯೂ ಸ್ವಚ್ಛವಾಗುವುದರ ಜೊತೆಗೆ ಇಡೀ ದೇಶವೇ ಸ್ವಚ್ಛ ಮತ್ತು ಆರೋಗ್ಯವಂತ ಭಾರತವಾಗಲು ಶ್ರಮಿಸಬೇಕು' ಎಂದು ಕರೆ ನೀಡಿದರು. ಮೈಸೂರು ಮಹಾನಗರ ಪಾಲಿಕೆಯ ಮತ್ತೊಬ್ಬ ಆರೋಗ್ಯಾಧಿಕಾರಿಗಳಾದ ಡಾ. ತಬಸುಮ್‌ರವರು ಉಪಸ್ಥಿತರಿದ್ದರು.